राष्ट्रीय सूचना विज्ञान केंद्र
National Informatics Centre

# National Scholarship Portal

Ministry of Electronics & Information Technology, Government of India

(For Academic Year 2022-23)

Digital India
Power To Empower

**Please check the Announcement corner regularly for latest updates and information.**
**For any technical queries, please contact Helpdesk at helpdesk[at]nsp[dot]gov[dot]in or 0120 - 6619540**
**(from 8 AM to 8 PM on all days, excluding holidays)**




## About Us

- About NSP
- Schemes on NSP
- Operational manual on functionalities of NSP
- Standard Operating Procedures

## Applicant Corner

**Login** -

- New Registration
- **Application Submission for AY 2022-23**
  - Fresh Application
  - Renewal Application
- Previous Year Application Status

**Scheme Information** +

## Institute Corner

**Login** -

- Institute Login
- Apply for KYC

**Institute Information** +

## Officer's Corner

**Login** -

- District Login
- State / Board login
- Ministry login

**Officer's Information** -

- Scheme-wise Nodal Officers List
- Scheme wise Grievance redress officer

## Public Corner

- Dashboard
- Search for Institutes on NSP
- List of Applicants processed for scholarships
- Search Scheme Wise Nodal Officer
- Schemes' Nodal Officers at District Level
- PFMS, Helpdesk
- Contact Us

Notice Board - For Students

Central Schemes | UGC / AICTE Schemes | State Schemes

**Ministry of Minority Affairs** -

| Scheme Name | Scheme Closing Date | Defective Application Verification Date | Institute Verification | DNO/SNO/MNO Verification | Guidelines/FAQ |
|---|---|---|---|---|---|

13/9/2

Principal
...magiri College of Engineering
...ndra, Hesaraghatta Road,
...lore-560 057

## ಕರ್ನಾಟಕ ಸರ್ಕಾರ

ಸಂಖ್ಯೆ:ಪಪೂಶಿಇ/ಶೈ.ಶಾ./ಕೇ.ಮಾ.ಸಂ.ಅ.ಸ.ವಿ.ವೇ.2022/2022-23

ನಿರ್ದೇಶಕರ ಕಛೇರಿ,
ಪದವಿ ಪೂರ್ವ ಶಿಕ್ಷಣ ಇಲಾಖೆ,
18ನೇ ಕ್ರಾಸ್, ಸಂಪಿಗೆ ರಸ್ತೆ,
ಮಲ್ಲೇಶ್ವರಂ, ಬೆಂಗಳೂರು-12.
ದಿನಾಂಕ:- 05/12/2022

### ಪತ್ರಿಕಾ ಪ್ರಕಟಣೆ

ಮಾನವ ಸಂಪನ್ಮೂಲ ಅಭಿವೃದ್ಧಿ ಸಚಿವಾಲಯ, ಉನ್ನತ ಶಿಕ್ಷಣ ಇಲಾಖೆ, ಕೇಂದ್ರ ಸರ್ಕಾರ, ನವದೆಹಲಿ ಇವರು, 2022-23ನೇ ಸಾಲಿನ CSSS ಯೋಜನೆಯ ವಿವಿಧ ನವೀಕರಣಗಳು ಹಾಗೂ Fresh Batchಗಳ ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸಲು ಈಗಾಗಲೇ ನಿಗಧಿಪಡಿಸಿದ್ದ ದಿನಾಂಕವನ್ನು ವಿಸ್ತರಿಸಿ, ದಿನಾಂಕ:-31-12-2022ರ ವರೆವಿಗೂ ಕಾಲಾವಕಾಶವನ್ನು ನೀಡಿರುತ್ತಾರೆ. ಆದಕಾರಣ, ಅರ್ಹ ವಿದ್ಯಾರ್ಥಿಗಳು (**Link for submission of application website:www.scholarship.gov.in =» New User(Register)** ಈ portalನಲ್ಲಿಯೇ 2022ರ Fresh Batchನ ಹಾಗೂ ವಿವಿಧ ನವೀಕರಣಗಳಿಗೆ ವಿದ್ಯಾರ್ಥಿಗಳು ಅರ್ಜಿಗಳನ್ನು "online" ಮೂಲಕ ಸಲ್ಲಿಸಬೇಕಿರುತ್ತದೆ. ಆಸಕ್ತ ಅರ್ಹ ವಿದ್ಯಾರ್ಥಿಗಳು ಸದರಿ ಪೋರ್ಟಲ್‌ನಲ್ಲಿ ಲಭ್ಯವಿರುವ **Guidelines**ನ್ನು ಖಡ್ಡಾಯವಾಗಿ ಓದಿ ಅರ್ಥೈಸಿಕೊಂಡು ಕೂಡಲೇ ಕೇಂದ್ರ ಸರ್ಕಾರದ ವತಿಯಿಂದ ವಿಸ್ತರಿಸಿರುವ ದಿನಾಂಕ:-31-12-2022ರೊಳಗಾಗಿ **"Online"** ಮೂಲಕ ಅರ್ಜಿಯನ್ನು ಸಲ್ಲಿಸಬಹುದಾಗಿರುತ್ತದೆ.

ಹಾಗೂ 2022ನೇ ಸಾಲಿನಲ್ಲಿ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕೆ (ಹೊಸ ಹಾಗೂ ನವೀಕರಣಗಳಿಗೆ) ಅರ್ಜಿ ಸಲ್ಲಿಸಲಿಚ್ಛಿಸುವ ಅರ್ಹ ವಿದ್ಯಾರ್ಥಿಗಳು ಕಡ್ಡಾಯವಾಗಿ ಆಧಾರ್ ನೋಂದಣಿ ಸಂಖ್ಯೆಯನ್ನು ಬ್ಯಾಂಕ್ ಖಾತೆಗೆ ಲಿಂಕ್ ಮಾಡಬೇಕಿರುತ್ತದೆ. ಆದಕಾರಣ, ಆಸಕ್ತ ಅರ್ಹ ವಿದ್ಯಾರ್ಥಿಗಳು ಆಧಾರ್ ನೊಂದಣಿ ಸಂಖ್ಯೆಯನ್ನು ಕಡ್ಡಾಯವಾಗಿ ಹೊಂದಿರಬೇಕಾಗಿ ಈ ಮೂಲಕ ತಿಳಿಸಿದೆ. ವಿದ್ಯಾರ್ಥಿಗಳು **"online"** ಮೂಲಕ ಸಲ್ಲಿಸಿದ ಎಲ್ಲಾ ದಾಖಲೆಗಳನ್ನು (ಮೂಲ ದಾಖಲೆಗಳ ಜೊತೆಯಲ್ಲಿ) ಪರಿಶೀಲನೆಗಾಗಿ ತಾವು ಅಧ್ಯಯನ ಮಾಡುತ್ತಿರುವ ಕಾಲೇಜುಗಳ ಪ್ರಾಚಾರ್ಯರುಗಳಿಗೆ ಕೇಂದ್ರ ಸರ್ಕಾರದಿಂದ ನಿಗದಿ ಪಡಿಸುವ ದಿನಾಂಕದೊಳಗಾಗಿ ಸಲ್ಲಿಸುವುದು.

ಪ್ರಾಚಾರ್ಯರುಗಳು, ವಿದ್ಯಾರ್ಥಿಗಳು **"online"** ಮೂಲಕ ಸಲ್ಲಿಸಿರುವ ಅರ್ಜಿಗಳನ್ನು **"online"**ನಲ್ಲಿ ಕೂಲಂಕುಷವಾಗಿ ಪರಿಶೀಲಿಸಿ, ಸದರಿ ವಿದ್ಯಾರ್ಥಿಯು ತಮ್ಮ ಕಾಲೇಜನಲ್ಲಿ ದಾಖಲಾಗಿ, ವಿದ್ಯಾಭ್ಯಾಸ ಮುಂದುವರಿಸಿರುವ ಬಗ್ಗೆ ಹಾಗೂ ವಿದ್ಯಾರ್ಥಿಯು ಈ ವಿದ್ಯಾರ್ಥಿ ವೇತನದ ಉದ್ದೇಶಕ್ಕಾಗಿ ಖಾತೆ ತೆರೆದಿರುವ ಬ್ಯಾಂಕ್‌ನ ವಿವರಗಳನ್ನು ಪರಿಶೀಲಿಸಿ ಖಚಿತ ಪಡಿಸಿಕೊಂಡು, ಸದರಿ ಮಾಹಿತಿಯನ್ನು **"online"** ಮೂಲಕವೇ ಕೇಂದ್ರ ಸರ್ಕಾರದ ವತಿಯಿಂದ ನಿಗದಿ ಪಡಿಸುವ ದಿನಾಂಕ: 15/01/2023ರೊಳಗೆ ಪರಿಶೀಲಿಸಲು ಕೋರಿದೆ. ಯಾವುದೇ ಕಾರಣಕ್ಕೂ ನೈಜ ವಿದ್ಯಾರ್ಥಿಯ ಹೊರತು ಆಯ್ಕೆಯಾಗದ ವಿದ್ಯಾರ್ಥಿಗೆ ವಿದ್ಯಾರ್ಥಿ ವೇತನ ಜಮೆಯಾಗದಂತೆ ನೋಡಿಕೊಳ್ಳುವ ಜವಾಬ್ದಾರಿ ಪ್ರಾಚಾರ್ಯರದ್ದಾಗಿರುತ್ತದೆ. ಈ ಸಂಬಂಧ ಹೆಚ್ಚಿನ ಮಾಹಿತಿಗೆ ಕೇಂದ್ರ ಕಛೇರಿಯ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನದ ಶಾಖೆಯನ್ನು ಸಂಪರ್ಕಿಸಲು ಕೋರಿ, ಪದವಿ ಪೂರ್ವ ಶಿಕ್ಷಣ ಇಲಾಖೆಯ **Website: http://pue.karnataka.gov.in =» Services & Schemes =» Administration =» Scholarship** ನಿಂದ ಮಾಹಿತಿಯನ್ನು ಪಡೆದುಕೊಳ್ಳಬಹುದು

ನಿರ್ದೇಶಕರು
ಪದವಿ ಪೂರ್ವ ಶಿಕ್ಷಣ ಇಲಾಖೆ.

ಪ್ರತಿ:-

1. ಸಹಾಯಕ ನಿರ್ದೇಶಕರು, ಇ-ಆಡಳಿತ ಶಾಖೆ, ಇಲಾಖಾ ಅಂತರ್ಜಾಲದಲ್ಲಿ ಪ್ರಕಟಿಸುವ ಸಲುವಾಗಿ.

Principal
Sapthagiri College of Engineering
14/5, Chikkesandra, Hesaraghatta Main Road
Bengaluru - 560 057

SAPTHAGIRI COLLEGE OF ENGINEERING
S.C.E.
BANGALORE

ಕರ್ನಾಟಕ ಸರ್ಕಾರ

## ಆಯುಕ್ತರ ಕಚೇರಿ
## ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

**ನಂ.16/ಡಿ, 3ನೇ ಮಹಡಿ, ದೇವರಾಜ ಅರಸು ಭವನ,**
**ಮಿಲ್ಲರ್ಸ್ ಟ್ಯಾಂಕ್ ಬೆಡ್ ಏರಿಯಾ, ವಸಂತನಗರ, ಬೆಂಗಳೂರು-560052**

**ಸಂ: BCWD-17012/22/2022-BCWD_SCHLR-BCWD** **ದಿನಾಂಕ:21.10.2022**

### ಪ್ರಕಟಣೆ

ಮೆಟ್ರಿಕ್-ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ-1 ಅಲೆಮಾರಿ/ಅರೆಅಲೆಮಾರಿ ವಿದ್ಯಾರ್ಥಿಗಳಿಂದ, 2022-23 ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ನೀಡಲಾಗುತ್ತಿರುವ "ಮೆಟ್ರಿಕ್-ನಂತರದ ವಿದ್ಯಾರ್ಥಿವೇತನ", "ಶುಲ್ಕ ಮರುಪಾವತಿ", ಮತ್ತು "ವಿದ್ಯಾಸಿರಿ-ಊಟ ಮತ್ತು ವಸತಿ ಸಹಾಯ ಯೋಜನೆ", ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, 31.12.2022 ಕ್ಕೆ ಅರ್ಜಿ ಸಲ್ಲಿಸುವ ಅಂತಿಮ ದಿನಾಂಕವನ್ನು ನಿಗದಿಪಡಿಸಲಾಗಿದೆ. ಅರ್ಹ ವಿದ್ಯಾರ್ಥಿಗಳು ಈ ಸೌಲಭ್ಯಗಳನ್ನು ಸದುಪಯೋಗ ಪಡಿಸಿಕೊಳ್ಳಲು ಸೂಚಿಸಿದೆ.

- **ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ :** **31.12.2022**
- **ಆನ್‌ಲೈನ್ ಮೂಲಕ ಅರ್ಜಿಸಲ್ಲಿಸಬೇಕಾದ ವೆಬ್ ಸೈಟ್ ವಿಳಾಸ :** https://ssp.postmatric.karnataka.gov.in
- **ಕಾರ್ಯಕ್ರಮಗಳ ವಿವರ, ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳು ಹಾಗೂ ವಿದ್ಯಾರ್ಥಿವೇತನಕ್ಕೆ ಸಂಬಂಧಿಸಿದ ಸರ್ಕಾರಿ ಆದೇಶಗಳ ಬಗ್ಗೆ ಮಾಹಿತಿಗಾಗಿ ಭೇಟಿ ನೀಡಬೇಕಾದ ವೆಬ್ ಸೈಟ್ ವಿಳಾಸ:** https://bcwd.karnataka.gov.in
- **ಇಲಾಖಾ ಸಹಾಯವಾಣಿ ದೂರವಾಣಿ ಸಂಖ್ಯೆ :** 8050770005
  **ಇಮೇಲ್:** bcwdhelpline@gmail.com
- **ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ಸಹಾಯವಾಣಿ ಇಮೇಲ್:** postmatrichelp@karnataka.gov.in
  **ದೂರವಾಣಿ ಸಂಖ್ಯೆ:** 080-35254757

**ಆಯುಕ್ತರು**
**ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ**
**ಬೆಂಗಳೂರು**

SAPTHAGIRI COLLEGE OF ENGINEERING
S.C.E.
BANGALORE

Principal
Sapthagiri College of Engineering
Chikkasandra, Hesaraghatta Road,
Bangalore-560 057

॥ ಓಂ ಶ್ರೀ ಮಂಜುನಾಥಾಯ ನಮಃ ॥
ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ ಟ್ರಸ್ಟ್ (ರಿ.) ಧರ್ಮಸ್ಥಳ
ಸಮುದಾಯ ಮತ್ತು ಅಭಿವೃದ್ಧಿ ವಿಭಾಗ – ಸುಜ್ಞಾನನಿಧಿ ಶಿಷ್ಯವೇತನ ಕಾರ್ಯಕ್ರಮ
Phone No: 9591770660
Email : hocdp@skdrdpindia.org
Website: www.skdrdpindia.org

ದಿನಾಂಕ: ____________

## ರಜತೋತ್ಸವ ಸುಜ್ಞಾನನಿಧಿ ಶಿಷ್ಯವೇತನ ಯೋಜನೆಯ ಮಾಹಿತಿ ಪತ್ರ

### (FOR NEW APPLICATION ONLY)

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ ಟ್ರಸ್ಟ್ (ರಿ.).ನ ಬೆಳ್ಳಿಹಬ್ಬದ ಆಚರಣೆಯ ಸವಿನೆನಪಿಗಾಗಿ. ಯೋಜನೆಯ ಪಾಲುದಾರ ಕುಟುಂಬದ ಸ್ವ-ಸಹಾಯ ಹಾಗೂ ಪ್ರಗತಿಬಂಧು ಸಂಘಗಳ, ಆರ್ಥಿಕವಾಗಿ ಹಿಂದುಳಿದ ಸದಸ್ಯರ ಮಕ್ಕಳ ತಾಂತ್ರಿಕ ಮತ್ತು ವೃತ್ತಿಪರ ಶಿಕ್ಷಣಕ್ಕೆ ನೆರವಾಗಲು ಪೂಜ್ಯ ಡಾ॥ ಡಿ. ವೀರೇಂದ್ರ ಹೆಗ್ಗಡೆಯವರು 2007 ರಲ್ಲಿ ಸುಜ್ಞಾನನಿಧಿ ಶಿಷ್ಯವೇತನ ಕಾರ್ಯಕ್ರಮವನ್ನು ಪ್ರಾರಂಭಿಸಿದರು.

ಸುಜ್ಞಾನನಿಧಿ ಕಾರ್ಯಕ್ರಮದಡಿಯಲ್ಲಿ ಶೈಕ್ಷಣಿಕ ವರ್ಷಕ್ಕೆ ಅನುಗುಣವಾಗಿ 2 ರಿಂದ 5 ವರ್ಷ ಅವಧಿಯ ತಾಂತ್ರಿಕ ಮತ್ತು ವೃತ್ತಿಪರ ಶಿಕ್ಷಣಗಳಿಗೆ ಸಂಸ್ಥೆಯು ನಿಗದಿಪಡಿಸಿದ ಆಯ್ದ ಕೋರ್ಸ್‌ಗೆ ಅನುಗುಣವಾಗಿ ರೂ 400 ರಿಂದ ರೂ 1000 ಸಾವಿರದವರೆಗೆ ಮಾಸಿಕ ಶಿಷ್ಯವೇತನವನ್ನು ಪಾವತಿಸಲಾಗುತ್ತಿದೆ. ಕರ್ನಾಟಕ ರಾಜ್ಯಾದ್ಯಂತ ಇದುವರೆಗೂ 52 ಸಾವಿರಕ್ಕೂ ಅಧಿಕ ವಿದ್ಯಾರ್ಥಿಗಳು ಈ ಕಾರ್ಯಕ್ರಮದ ಪ್ರಯೋಜನ ಪಡೆದುಕೊಂಡಿರುತ್ತಾರೆ. ಸದ್ರಿ ವಿದ್ಯಾರ್ಥಿಗಳಿಗೆ ರೂ. 67 ಕೋಟಿಗೂ ಅಧಿಕ ಶಿಷ್ಯವೇತನವನ್ನು ಈವರೆಗೆ ವಿತರಿಸಲಾಗಿದೆ.

**2022-23ನೇ ಸಾಲಿಗೆ ಸುಜ್ಞಾನನಿಧಿ ಶಿಷ್ಯವೇತನಕ್ಕೆ ಹೊಸದಾಗಿ ( NEW STUDENT ) ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳು ಈ ಕೆಳಗಿನ ಅರ್ಹತೆಗಳನ್ನು ಹೊಂದಿರಬೇಕು :-**

1. ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ (ರಿ) ಪ್ರಾಯೋಜಿಸುತ್ತಿರುವ ಪ್ರಗತಿಬಂಧು ಹಾಗೂ ಸ್ವ-ಸಹಾಯ ತಂಡಗಳಲ್ಲಿ ದಿನಾಂಕ 30.06.2021 ಕ್ಕಿಂತ ಮೊದಲು ಪ್ರಾರಂಭಿಸಲಾದ ಸಂಘದಲ್ಲಿ ಸದಸ್ಯರಾಗಿದ್ದು ವ್ಯವಹಾರದಲ್ಲಿ ಎಸ್. ಎ ಮತ್ತು ಬಿ ಶ್ರೇಣಿಯಲ್ಲಿರುವ ಗುಂಪುಗಳ ಸದಸ್ಯರ ಮಕ್ಕಳು ಅರ್ಜಿ ಸಲ್ಲಿಸಬಹುದು.
2. ತಂದೆ, ತಾಯಿ ಅಥವಾ ಒಂದೇ ಮನೆಯಲ್ಲಿ ವಾಸ ಮಾಡುವ, ಒಂದೇ ರೇಷನ್ ಕಾರ್ಡ್ ಹೊಂದಿರುವ, ಸಂಘದ ಯಾವುದೇ ಸದಸ್ಯರ ಒಬ್ಬ ಮಗ/ಮಗಳಿಗೆ (ಒಂದು ಕುಟುಂಬದಿಂದ ಒಂದು ವಿದ್ಯಾರ್ಥಿಗೆ) ಮಾತ್ರ ಅರ್ಜಿ ಸಲ್ಲಿಸಲು ಅವಕಾಶವಿದೆ.
3. ಹಳೆಯ ಸಂಘ ಬರ್ಕಾಸ್ತುಗೊಂಡು ಹೊಸ ಸಂಘಕ್ಕೆ ಸೇರ್ಪಡೆಯಾಗಿ ಕಡ್ಡಾಯವಾಗಿ ಒಂದು ವರ್ಷ ಸಂಪೂರ್ಣಗೊಂಡಿರುವ ಸಂಘದ ಸದಸ್ಯರ ಮಕ್ಕಳು ಅರ್ಜಿ ಸಲ್ಲಿಸಬಹುದು.
4. ವಿದ್ಯಾರ್ಹತೆ : ಅರ್ಹ ಮಕ್ಕಳು SSLC/PUC/DEGREE ಅಥವಾ ಅರ್ಹ ಕೋರ್ಸಿನ ಸೇರ್ಪಡೆಗೆ ನಿಗದಿಪಡಿಸಿದ ಪರೀಕ್ಷೆಗಳಲ್ಲಿ ತೇರ್ಗಡೆ ಹೊಂದಿದ, ಶಿಷ್ಯವೇತನಕ್ಕೆ ಆಯ್ಕೆ ಮಾಡಿದ ಕೋರ್ಸಿನ ಪ್ರಥಮ ವರ್ಷದ ಮೊದಲ ಸೆಮಿಸ್ಟರ್ ವಿದ್ಯಾರ್ಥಿಗಳಿಗೆ ಮಾತ್ರ ಅವಕಾಶ ನೀಡಲಾಗುವುದು.
5. ಆಯ್ಕೆಯಾದ ವಿದ್ಯಾರ್ಥಿ/ನಿಯು ರಾಷ್ಟ್ರೀಕೃತ ಬ್ಯಾಂಕ್‌ನಲ್ಲಿ ಉಳಿತಾಯ ಖಾತೆಯನ್ನು ಹೊಂದಿರಬೇಕು. UPLOAD ಮಾಡುವ ಬ್ಯಾಂಕ್ ಪಾಸ್ ಪುಸ್ತಕದಲ್ಲಿ ಬ್ಯಾಂಕ್ ವ್ಯವಸ್ಥಾಪಕರ ಸಹಿ ಮತ್ತು ಮುದ್ರೆ ಕಡ್ಡಾಯವಾಗಿ ಇರಬೇಕು. ಸದ್ರಿ ಖಾತೆಯಲ್ಲಿ ವ್ಯವಹಾರಗಳು ಪ್ರಸ್ತುತ ಮೂರು ತಿಂಗಳಿನಿಂದ ಚಾಲ್ತಿಯಲ್ಲಿರಬೇಕು. ಖಾತೆ ಸಂಖ್ಯೆ ಕಾಣಿಸದೇ ಇದ್ದಲ್ಲಿ ಕೈ ಬರಹದ ಖಾತೆ ಸಂಖ್ಯೆ, ಬ್ರಾಂಚ್ ಹೆಸರು ಮತ್ತು IFSC CODE ನ್ನು ಯಾವುದೇ ಕಾರಣಕ್ಕೂ ಪರಿಗಣಿಸಲಾಗುವುದಿಲ್ಲ.
6. 01.4.2022 ನಂತರ ಕಾಲೇಜಿಗೆ ದಾಖಲಾದ ಎಲ್ಲಾ ಮೊದಲ ಸೆಮಿಸ್ಟರ್ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದು (ಕಾಲೇಜು ದೃಢೀಕರಣದಲ್ಲಿ ಕಡ್ಡಾಯವಾಗಿ ಕಾಲೇಜಿಗೆ ದಾಖಲಾದ ದಿನಾಂಕ ನಮೂದಿಸಿರಬೇಕು)
7. ಸುಜ್ಞಾನನಿಧಿ ಶಿಷ್ಯವೇತನವು ಶೈಕ್ಷಣಿಕ ವರ್ಷಕ್ಕೆ ಅನುಗುಣವಾಗಿ ಸಂಸ್ಥೆಯು ಆಯ್ಕೆ ಮಾಡಿ ನಿಗದಿಪಡಿಸಿದ 2 ರಿಂದ 5 ವರ್ಷ ಅವಧಿಯ ಕೆಲವು ವೃತ್ತಿಪರ ಹಾಗೂ ತಾಂತ್ರಿಕ ಶಿಕ್ಷಣದ ಕೋರ್ಸುಗಳಿಗೆ, ಸಂಸ್ಥೆಯ ನಿಯಮಾನುಸಾರ ನಿಗದಿ ಪಡಿಸಿದ ಕೋರ್ಸ್‌ಗೆ ಅನುಗುಣವಾಗಿ ರೂ 400 ರಿಂದ ರೂ 1000 ಸಾವಿರದವರೆಗೆ ಮಾತ್ರವೇ ಶಿಷ್ಯವೇತನ ನೀಡಲಾಗುವುದು.
8. ವಿದ್ಯಾರ್ಥಿಗಳು Online ಮೂಲಕ Sujnananidhi App ನಲ್ಲಿ ಅರ್ಜಿ ಸಲ್ಲಿಸುವ ಮೊದಲು ಈ ಮಾಹಿತಿ ಪತ್ರವನ್ನು ಸರಿಯಾಗಿ ಓದಿಕೊಂಡು ಅಗತ್ಯವಾದ ಮಾಹಿತಿಯನ್ನು ಹಾಗೂ ದಾಖಲಾತಿಗಳನ್ನು ಸಂಗ್ರಹಿಸಿಕೊಂಡ ನಂತರ, ಅರ್ಜಿ ಸಲ್ಲಿಕೆಯ ಸಂದರ್ಭದಲ್ಲಿ ಅಗತ್ಯ ಎಲ್ಲಾ ಪೂರಕ ದಾಖಲಾತಿಗಳೊಂದಿಗೆ ದಿನಾಂಕ 31.03.2023ರೊಳಗೆ, Online ಮೂಲಕ Sujnananidhi App ನಲ್ಲಿ ರಿಜಿಸ್ಟ್ರೇಷನ್ ಮಾಡಿಕೊಂಡು ಅರ್ಜಿ ಸಲ್ಲಿಸಬಹುದಾಗಿದೆ.

Principal
Sapthagiri College of Engineering
Chikkasandra, Hesaraghatta Road,
Bangalore-560 057

SAPTHAGIRI COLLEGE OF ENGINEERING
S.C.E.
★BANGALORE★

# ಕರ್ನಾಟಕ ಸರ್ಕಾರ

## ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ, ಯಶವಂತಪುರ, ಬೆಂಗಳೂರು

### ಪತ್ರಿಕಾ ಪ್ರಕಟಣೆ

ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿಗೆ ವಂತಿಕೆ ಪಾವತಿಸುವ ಸಂಘಟಿತ ಕಾರ್ಮಿಕರ ಮಕ್ಕಳಿಂದ (ಪ್ರೌಢ ಶಾಲೆಯಿಂದ ಸ್ನಾತಕೋತ್ತರ ಪದವಿಯವರೆಗೆ ಹಾಗೂ ವೈದ್ಯಕೀಯ/ಇಂಜಿನಿಯರಿಂಗ್‌ನಲ್ಲಿ ವ್ಯಾಸಂಗ ಮಾಡುತ್ತಿರುವವರಿಗೆ) 2022-23ನೇ ಸಾಲಿಗೆ ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯಕ್ಕೆ ಆನ್‌ಲೈನ್ ಮುಖಾಂತರ ಅರ್ಜಿಯನ್ನು ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 31-12-2022. ಕಾರ್ಮಿಕರ ಮಾಸಿಕ ವೇತನ ರೂ.35,000/- ಗಿಂತ ಮೀರಿರಬಾರದು. (ಒಂದು ಕುಟುಂಬದಲ್ಲಿ ಒಬ್ಬ ವಿದ್ಯಾರ್ಥಿಗೆ ಮಾತ್ರ ಈ ಸೌಲಭ್ಯ ನೀಡಲಾಗುವುದು)

ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯ ಬಯಸುವ ವಿದ್ಯಾರ್ಥಿಗಳು ಆನ್‌ಲೈನ್ ಮುಖಾಂತರ ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿಯ ವೆಬ್‌ಸೈಟ್‌ನಲ್ಲಿ www.klwbapps.karnataka.gov.in ಅರ್ಜಿ ಸಲ್ಲಿಸಬಹುದಾಗಿರುತ್ತದೆ. (ಅರ್ಜಿ ಸಲ್ಲಿಸಲು ವಿದ್ಯಾರ್ಥಿಯು ಹಿಂದಿನ ವರ್ಷದಲ್ಲಿ ಸಾಮಾನ್ಯ ವರ್ಗ ಶೇ.50 ಪ.ಜಾ/ಪ.ಪಂ.45 ರಷ್ಟು ಅಂಕ ಪಡೆದು ತೇರ್ಗಡೆಯಾಗಿರಬೇಕು)

ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ, ಕಾರ್ಮಿಕ ಕಲ್ಯಾಣ ಭವನ, ನಂ.48, 1ನೇ & 2ನೇ ಮಹಡಿ, ಮತ್ತೀಕೆರೆ ಮುಖ್ಯರಸ್ತೆ, ಯಶವಂತಪುರ, ಬೆಂಗಳೂರು-560022 ಇಲ್ಲಿ ಖುದ್ದಾಗಿ ಅಥವಾ ದೂರವಾಣಿ ಸಂಖ್ಯೆ: 080-23475188, 8277291175, 8277120505, 9141585402, 9141602562 ಮೂಲಕ ಸಂಪರ್ಕಿಸಬಹುದಾಗಿದೆ.

S.R.

ಕಲ್ಯಾಣ ಆಯುಕ್ತರು
ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ,
ಕಾರ್ಮಿಕ ಕಲ್ಯಾಣ ಭವನ, ನಂ.48, 1ನೇ & 2ನೇ ಮಹಡಿ,
ಮತ್ತೀಕೆರೆ ಮುಖ್ಯರಸ್ತೆ, ಯಶವಂತಪುರ, ಬೆಂಗಳೂರು-560022

Principal
Sapthagiri College of Engineering
Chikkasandra, Hesaraghatta Road,
Bangalore-560 057

SAPTHAGIRI COLLEGE OF ENGINEERING
S.C.E.
BANGALORE

## ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯ ಅರ್ಜಿ ಸಲ್ಲಿಸಲು ಪಾಲಿಸಬೇಕಾದ ಸೂಚನೆಗಳು

1) ಒಂದು ಕುಟುಂಬದಿಂದ ಒಬ್ಬ ವಿದ್ಯಾರ್ಥಿಗೆ ಮಾತ್ರ ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯಕ್ಕಾಗಿ ಅರ್ಜಿ ಸಲ್ಲಿಸಲು ಅವಕಾಶವಿರುತ್ತದೆ. ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ತಿರಸ್ಕರಿಸಲಾಗುವುದು.

2) ಪಾಸ್‌ಬುಕ್ ಜೆರಾಕ್ಸ್ ಪ್ರತಿ ಲಗತ್ತಿಸುವಾಗ Account Number ಮತ್ತು IFSC Code ಸ್ಪಷ್ಟವಾಗಿ ಕಾಣುವಂತಿರಬೇಕು. ತಪ್ಪಿದಲ್ಲಿ ಅಂತಹ ಅರ್ಜಿಯನ್ನು ತಿರಸ್ಕರಿಸಲಾಗುವುದು.

3) ಎಸ್.ಎಸ್.ಎಲ್.ಸಿ. ಮತ್ತು ಪಿ.ಯು.ಸಿ. ಅಂಕಪಟ್ಟಿಯಲ್ಲಿನ ವಿವರಗಳು ಸ್ಪಷ್ಟವಾಗಿ ಕಾಣುವಂತಿರಬೇಕು. ತಪ್ಪಿದಲ್ಲಿ ಅಂತಹ ಅರ್ಜಿಯನ್ನು ತಿರಸ್ಕರಿಸಲಾಗುವುದು.

4) ಪದವಿ, ಸ್ನಾತಕೋತ್ತರ ಮತ್ತು ಇಂಜಿನಿಯರಿಂಗ್ & ಮೆಡಿಕಲ್ ವಿದ್ಯಾರ್ಥಿಗಳ ಅಂಕಪಟ್ಟಿಗಳ ವಿವರಗಳು ಸ್ಪಷ್ಟವಾಗಿ ಕಾಣುವಂತಿರಬೇಕು ಮತ್ತು ಹಿಂದಿನ 2 ಸೆಮಿಸ್ಟರ್‌ಗಳ ಅಂಕಪಟ್ಟಿಯನ್ನು ಕಡ್ಡಾಯವಾಗಿ ಅಪ್‌ಲೋಡ್ ಮಾಡಬೇಕು. ತಪ್ಪಿದಲ್ಲಿ ಅಂತಹ ಅರ್ಜಿಯನ್ನು ತಿರಸ್ಕರಿಸಲಾಗುವುದು.

5) ವಿದ್ಯಾರ್ಥಿ, ತಂದೆ, ತಾಯಿ ಈ 3 ಜನರ ಆಧಾರ್ ಕಾರ್ಡ್ ಕಡ್ಡಾಯವಾಗಿ ಅಪ್‌ಲೋಡ್ ಮಾಡಬೇಕು. ಆಧಾರ್ ಸಂಖ್ಯೆ ತಪ್ಪಾಗಿ ನಮೂದಿಸಿದಲ್ಲಿ ಅಥವಾ ತಪ್ಪಾಗಿ ಪಿ.ಡಿ.ಎಫ್. ಅಪ್‌ಲೋಡ್ ಮಾಡಿದಲ್ಲಿ ತಪ್ಪಿದಲ್ಲಿ ಅಂತಹ ಅರ್ಜಿಯನ್ನು ತಿರಸ್ಕರಿಸಲಾಗುವುದು.

6) ತಂದೆ ಅಥವಾ ತಾಯಿ ಮರಣ ಹೊಂದಿದ್ದಲ್ಲಿ, ಅವರ ಮರಣ ಪ್ರಮಾಣ ಪತ್ರ ಅಪ್‌ಲೋಡ್ ಮಾಡಬೇಕು. ತಪ್ಪಿದಲ್ಲಿ ಅಂತಹ ಅರ್ಜಿಯನ್ನು ತಿರಸ್ಕರಿಸಲಾಗುವುದು.